# ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ:- ಹಿಂದುಳಿದ ವರ್ಗಗಳ ಯುವ ಜನರಿಗೆ ಕೌಶಲ್ಯ ಅಭಿವೃದ್ಧಿ ಪಡಿಸಿ ಉದ್ಯೋಗ ಮುಖಿಯನ್ನಾಗಿಸಲು ಅಲ್ಪಾವಧಿ ಕೋರ್ಸ್‌ಗಳ ಮೂಲಕ ಕೌಶಲ್ಯ ತರಬೇತಿ ನೀಡಲು ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಎಂಬ ಹೊಸ ಯೋಜನೆಯನ್ನು ಆರಂಭಿಸುವ ಕುರಿತು.

ಓದಲಾಗಿದೆ:-
1. 2022-23ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆ ಕಂಡಿಕೆ:177.
2. ದಿನಾಂಕ:28.03.2022 ರಂದು ಸ್ವಾತಂತ್ರ್ಯ ಅಮೃತ್ ಮಹೋತ್ಸವದ ಮುನ್ನಡೆ ಯೋಜನೆಯ ಅನುಷ್ಠಾನದ ಕುರಿತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಕೌಶಲ್ಯಾಭಿವೃಧ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಧಿಕಾರಿಗಳೊಂದಿಗೆ ನಡೆದ ಸಭೆ ಹಾಗೂ ಚರ್ಚೆ.

* * * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 177ರಲ್ಲಿ "ಹಿಂದುಳಿದ ವರ್ಗಗಳ ಸುಮಾರು 25,000 ಯುವ ಜನರಿಗೆ ಕೌಶಲ್ಯ ಅಭಿವೃದ್ಧಿ ಪಡಿಸಿ ಉದ್ಯೋಗ ಮುಖಿಯನ್ನಾಗಿಸಲು ಸರ್ಕಾರದ ಸಂಸ್ಥೆಗಳಾದ ITIs, GTTC, KGTTIರಲ್ಲಿ ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ ನೀಡಲು "ಅಮೃತ ಮುನ್ನಡೆ" ಎಂಬ ಹೊಸ ಯೋಜನೆಯನ್ನು ಆರಂಭಿಸಲಾಗುವುದು" ಎಂದು ಘೋಷಿಸಲಾಗಿದೆ.

10ನೇ ತರಗತಿ/ದ್ವಿತೀಯ ಪಿಯುಸಿ/ಡಿಪ್ಲೋಮ/ಪದವಿ/ಇಂಜಿನಿಯರಿಂಗ್ ನಂತರ ಯುವಜನರ ಉದ್ಯೋಗ ಸಾಮಾರ್ಥ್ಯವನ್ನು ಹೆಚ್ಚಿಸಲು ಅವಶ್ಯಕತೆ ಇರುತ್ತದೆ. ಈ ನಿಟ್ಟಿನಲ್ಲಿ ಸ್ವಾತಂತ್ರ್ಯ ಅಮೃತ್ ಮಹೋತ್ಸವದ ಮುನ್ನಡೆ ಯೋಜನೆಯು 25,000 ಅರ್ಹ ಹಿಂದುಳಿದ ವರ್ಗಗಳ ಯುವಜನರಿಗೆ ಉದ್ಯೋಗ ಅವಕಾಶಗಳನ್ನು ಹೆಚ್ಚಿಸಲು ಹೊಸ ಯೋಜನೆಯಾಗಿದೆ. ಇಲಾಖೆಯು ಹಿಂದುಳಿದ ವರ್ಗಗಳ ಯುವಜನರಿಗೆ ಸಾಮಾಜಿಕ-ಆರ್ಥಿಕ ಸ್ಥಿತಿಗತಿಗಳ ಉನ್ನತಿಗಾಗಿ ಸಂವಿಧಾನದ 15(4)ವಿಧಿಯ ಅಡಿಯಲ್ಲಿ ತನ್ನ ಜಾವಾಬ್ದಾರಿಗಳನ್ನು ನಿಬಾಯಿಸಲು ಕೇಂದ್ರಿಕೃತ ಯೋಜನೆಯಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಂತೆ ದಿನಾಂಕ:28.03.2022ರಂದು ಸ್ವಾತಂತ್ರ್ಯ ಅಮೃತ್ ಮಹೋತ್ಸವದ ಮುನ್ನಡೆ ಯೋಜನೆಯ ಅನುಷ್ಠಾನದ ಕುರಿತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದ್ದು, ಸದರಿ ಸಭೆಯಲ್ಲಿ ಎರಡು ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು, ಸರ್ಕಾರದ ಅಪರ ಕಾರ್ಯದರ್ಶಿ, ಕೌಶಲ್ಯಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ನಿರ್ದೇಶಕರು, ಕೈಗಾರಿಕೆ ತರಬೇತಿ ಮತ್ತು ಉದ್ಯೋಗ ಇಲಾಖೆ, ವ್ಯವಸ್ಥಾಪಕ

13/4/22

ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ವ್ಯವಸ್ಥಾಪಕ ನಿರ್ದೇಶಕರು, ನಿಜಶರಣ ಅಂಬಿಗರ ಚೌಡಯ್ಯ ನಿಗಮ(ನಿ), ವ್ಯವಸ್ಥಾಪಕ ನಿರ್ದೇಶಕರು, ಜಿ.ಟಿ.ಟಿ.ಸಿ, ವ್ಯವಸ್ಥಾಪಕ ನಿರ್ದೇಶಕರು, ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ಮತ್ತು ಇತರೆ ವ್ಯವಸ್ಥಾಪಕ ನಿರ್ದೇಶಕರುಗಳು/ಅಧಿಕಾರಿಗಳು ಹಾಜರಿದ್ದು, ಪ್ರಸ್ತಾಪಿಸಿರುವ ಹೊಸ ಯೋಜನೆಯ ರೂಪುರೇಷಗಳ ಬಗ್ಗೆ ಹಾಗೂ ಅನುಷ್ಠಾನದ ಮಾರ್ಗಸೂಚಿಗಳ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.

ಅದರಂತೆ, ಈ ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ229 ಬಿಎಂಎಸ್ 2022**
**ಬೆಂಗಳೂರು, ದಿನಾಂಕ:13-04-2022**

ಈ ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 177ರಲ್ಲಿ ಘೋಷಿಸಿರುವಂತೆ ಹಿಂದುಳಿದ ವರ್ಗಗಳ ಸುಮಾರು 25,000 ಯುವ ಜನರಿಗೆ ಕೌಶಲ್ಯ ಅಭಿವೃದ್ಧಿ ಪಡಿಸಿ ಉದ್ಯೋಗ ಮುಖಿಯನ್ನಾಗಿಸಲು ಸರ್ಕಾರದ ಸಂಸ್ಥೆಗಳಾದ ITIs, GTTCs, KGTTIsರಲ್ಲಿ ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ ನೀಡಲು ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ ಎಂಬ ಹೊಸ ಯೋಜನೆಯನ್ನು ಆರಂಭಿಸಲು ಈ ಕೆಳಕಂಡ ಮಾರ್ಗಸೂಚಿಗಳಂತೆ ಹಾಗೂ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

**ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗೆ ಮಾರ್ಗಸೂಚಿಗಳು:-**

**1. ಯೋಜನೆಯ ಉದ್ದೇಶಗಳು:**

10ನೇ ತರಗತಿ/ದ್ವಿತೀಯ ಪಿಯುಸಿ/ಡಿಪ್ಲೋಮ/ಪದವಿ/ಇಂಜಿನಿಯರಿಂಗ್ ಅನ್ನು ಪೂರ್ಣಗೊಳಿಸಿದ 25,000 ಅರ್ಹ ನಿರುದ್ಯೋಗಿ ಹಿಂದುಳಿದ ವರ್ಗಗಳ ಯುವಜನರನ್ನು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ನಡೆಸುತ್ತಿರುವ ಸರ್ಕಾರದ ಸಂಸ್ಥೆಗಳಾದ ITIs/GTTCs/KGTTIs ಗಳಲ್ಲಿ ಲಭ್ಯವಿರುವ ಅಲ್ಪಾವಧಿಯ ಕೋರ್ಸ್ ಗಳ ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಅವಕಾಶಗಳನ್ನು ಹೆಚ್ಚಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಇಂತಹ ಅರ್ಹ ಹಿಂದುಳಿದ ವರ್ಗಗಳ ಯುವಜನರನ್ನು ಸಂಬಂಧಪಟ್ಟ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ನಿಗಮಗಳು ಅರ್ಹ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ನಡೆಸುತ್ತಿರುವ ಸರ್ಕಾರದ ಸಂಸ್ಥೆಗಳಾದ ITIs/GTTCs/KGTTIs ಗಳಲ್ಲಿ ಅಲ್ಪಾವಧಿಯ ಉನ್ನತ ಕೌಶಲ್ಯ ಕೋರ್ಸ್‌ಗಳಿಗೆ ಪ್ರಾಯೋಜಿಸುತ್ತವೆ.

**I. ಸದರಿ ಯೋಜನೆಯ ಅಡಿಯಲ್ಲಿ ಅರ್ಜಿ ಹಾಕಲು ಅಭ್ಯರ್ಥಿಯು ಹೊಂದಿರಬೇಕಾಗಿರುವ ಅರ್ಹತಾ ಮಾನದಂಡಗಳು:**

a) ಸದರಿ ಯೋಜನೆಗೆ ಅರ್ಜಿದಾರರು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯಲ್ಲಿ ನಮೂದಿಸಲಾದ ಜಾತಿಗೆ ಸೇರಿದವರಾಗಿರಬೇಕು ಹಾಗೂ ಈ ಜಾತಿಯು

13/4/22